9-12-2024

(9)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪಿ ಹೆಚ್ ಪೂಜಾರ ಇವರು ಮಂಡಿಸಿರುವ ಶೂನ್ಯ ವೇಳೆ ಪ್ರಸ್ತಾಪಕ್ಕೆ ಮಾನ್ಯ ಗೃಹ ಸಚಿವರ ಹೇಳಿಕೆ:**

**ಪ್ರಶ್ನೆ:**

ಇಡೀ ರಾಜ್ಯದಲ್ಲಿ ರಾಜ್ಯ ಸರ್ಕಾರದಿಂದ ಅಗತ್ಯ ಸೌಲಭ್ಯಗಳು ಸಿಗದೇ ವಂಚಿತರಾಗಿರುವ 1.32 ಲಕ್ಷ ಮಾಜಿ ಯೋಧರು ತಮಗೆ ಆಗಿರುವ ಅನ್ಯಾಯವನ್ನು ಖಂಡಿಸಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ (ರಿ) ವು ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಲು ಮುಂದಾಗಿರುವುದು ಅತ್ಯಂತ ನೋವಿನ ಸಂಗತಿ, ಸರ್ಕಾರವು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಲು ಮುಂದಾಗಿರುತ್ತಾರೆ.

ರಾಜ್ಯ ಸರ್ಕಾರವು ನಿವೇಶನ ಮತ್ತು ಭೂ ಮಂಜೂರಾತಿ ಮಾಡಲು ಹಲವಾರು ಆದೇಶಗಳನ್ನು ಹೊರಡಿಸಿದ್ದರೂ ಸಹ ಮಾಜಿ ಯೋಧರಿಗೆ ನಿವೇಶನ ನೀಡಲು ಮೀನಾಮೇಷ ಮಾಡುತ್ತಿರುವ ಸ್ಥಳೀಯ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರ್ ಹಾಗೂ ಅಧಿಕಾರಿಗಳು ನಿವೇಶನ ಮಂಜೂರು ಮಾಡಲು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಅಲ್ಲದೇ ಕಚೇರಿಗಳಿಗೆ ಅಲೆದಾಡಿಸುತ್ತಾರೆ ಎಂದು ಮಾಜಿ ಸೈನಿಕರು ಹಾಗೂ ವೀರನಾರಿಯರು ಅಳಲು ತೋಡಿಕೊಂಡಿರುವ ಸುದ್ದಿ ವರದಿಯಾಗಿದೆ. ಉದ್ಯೋಗದಲ್ಲಿ ಮೀಸಲಾತಿ ನೀಡಿ, ಸರ್ಕಾರದ ಉದ್ಯೋಗಗಳಲ್ಲಿ ಶೇ.10 ಮೀಸಲಾತಿಯನ್ನು ನೀಡಬೇಕು ಸರ್ಕಾರದ ಕೆ.ಪಿ.ಎಸ್.ಸಿ. ಕೆ.ಐ.ಎ ಹಾಗೂ ಉಳಿದ ನೇಮಕಾತಿ ಪ್ರಾಧಿಕಾರಗಳು ಶೇ. 10% ಮೀಸಲಾತಿ ನೀಡುವಲ್ಲಿ ಸರ್ಕಾರ ನಿರ್ಲಕ್ಷ್ಯ ಮಾಡುತ್ತಿದೆ ಎಂದು ಮಾಜಿ ಯೋಧರ ನೇರ ಆರೋಪವಾಗಿದೆ.

ಮಾಜಿ ಯೋಧರು ತಮ್ಮ ಕೆಲಸಕ್ಕೆ ಕಛೇರಿಗಳಿಗೆ ತೆರಳಿದಾಗ ಅಧಿಕಾರಿಗಳು ಅಲೆದಾಡಿಸುತ್ತಿರುವುದು, ಜಮೀನು ಮಂಜೂರು ಮಾಡುವಾಗ ಅಧಿಕಾರಿಗಳ ಕಿರುಕುಳ ಹಾಗೂ ಭ್ರಷ್ಟಾಚಾರದ (ಹಣದ ಆಮೀಷ) ಮಾಡುತ್ತಿದ್ದಾರೆ ಎಂದು ನೇರವಾಗಿ ಆರೋಪಿಸಿದ್ದಾರೆ.

ಈ ಎಲ್ಲಾ ಅಳಲುಗಳ ಜೊತೆಗೆ ಅವರು ಕೆಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸುತ್ತಿದ್ದಾರೆ. ಶೇ. 50 ಕಂದಾಯ ರಿಯಾಯಿತಿ ನೀಡುವುದು, ದೇಶಕ್ಕಾಗಿ ಬಲಿದಾನ, ತ್ಯಾಗ, ಸೇವೆ ಮಾಡಿರುವುದರಿಂದ ಕೇಂದ್ರ ಸರ್ಕಾರವು ನಿವೇಶನದ ಮೇಲೆ, ಜಮೀನಿನ ಮೇಲೆ, ಸಿ.ಎಸ್.ಡಿ ಕ್ಯಾಂಟೀನ್, ಸಾಮಗ್ರಿಗಳ ಮೇಲೆ ಕಂದಾಯವನ್ನು ಸಂಪೂರ್ಣ ರಿಯಾಯಿತಿ ನೀಡಿದ್ದು, ಆದರೆ, ರಾಜ್ಯ ಸರ್ಕಾರವು ಶೇ.50 ಕಂದಾಯವನ್ನು ವಸೂಲಿ ಮಾಡುತ್ತಿರುವುದನ್ನು ಸಂಪೂರ್ಣ ರಿಯಾಯಿತಿ ನೀಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿರುವುದನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ ಮಾಜಿ ಸೈನಿಕರ ಬೇಡಿಕೆಗಳನ್ನು ಈಡೇರಿಸಿ ನ್ಯಾಯ ಒದಗಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸುತ್ತೇನೆ.

**ಉತ್ತರ:**

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಮಾಜಿ ಸೈನಿಕರಿಗೆ ನಿವೇಶನ ಮತ್ತು ಜಮೀನನ್ನು ಮಂಜೂರು ಮಾಡಲು ಸಂಬಂಧಿಸಿದಂತೆ ಜಿಲ್ಲಾ ಅಧಿಕಾರಿಗಳಿಗೆ ಮತ್ತು ತಹಶೀಲ್ದಾರ್‌ಗಳಿಗೆ ಶಿಫಾರಸ್ಸಿನೊಂದಿಗೆ ರವಾನಿಸಲಾಗಿರುತ್ತದೆ. ರಾಜ್ಯ ಸರ್ಕಾರವು ನಿವೇಶನ ಮತ್ತು ಭೂ ಮಂಜೂರಾತಿ ಹಲವಾರು ಆದೇಶಗಳನ್ನು ಹೊರಡಿಸಲಾಗಿದೆ. ನಿವೇಶನ ಮತ್ತು

ಜಮೀನನ್ನು ಮಂಜೂರು ಮಾಡುವ ಬಗ್ಗೆ ಕಂದಾಯ ಇಲಾಖೆಯು ಮುಂದಿನ ಕ್ರಮ ಜರುಗಿಸಬೇಕಾಗಿರುತ್ತದೆ.

ಉದ್ಯೋಗದಲ್ಲಿ ಮಾಜಿ ಸೈನಿಕರಿಗೆ ಶೇಕಡ 10 ರಷ್ಟು ಮೀಸಲಾತಿ ನೀಡಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುತ್ತದೆ. ಸರ್ಕಾರದ ಆದೇಶದ ಪ್ರಕಾರ ಕೆ.ಪಿ.ಎಸ್.ಸಿ, ಕೆ.ಇ.ಎ ಹಾಗೂ ಉಳಿದ ನೇಮಕಾತಿ ಪ್ರಾಧಿಕಾರಗಳು ಶೇಕಡ 10 ರಷ್ಟು ಮೀಸಲಾತಿ ನೀಡಲು ಕ್ರಮ ವಹಿಸಬೇಕಾಗಿರುತ್ತದೆ.

ಮಾಜಿ ಯೋಧರು ತಮ್ಮ ಕೆಲಸಕ್ಕೆ ಕಛೇರಿಗಳಿಗೆ ತೆರಳಿದಾಗ ಅಧಿಕಾರಿಗಳು ಅಲೆದಾಡಿಸುತ್ತಿರುವುದು, ಜಮೀನು ಮಂಜೂರು ಮಾಡುವಾಗ ಅಧಿಕಾರಿಗಳ ಕಿರುಕುಳ ಹಾಗೂ ಭ್ರಷ್ಟಾಚಾರದ (ಹಣದ ಆಮೀಷ) ಮಾಡುತ್ತಿದ್ದಾರೆ ಎಂಬ ಆರೋಪಗಳ ಬಗ್ಗೆ ಸರ್ಕಾರಕ್ಕೆ ಯಾವುದೇ ದೂರುಗಳು ಬಂದಿರುವುದಿಲ್ಲ. ದೂರುಗಳು ಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಪ್ರಸ್ತುತ ನಗರ ಪಾಲಿಕೆ / ಜಿಲ್ಲಾ ಪಂಚಾಯಿತಿ ಅಡಿಯಲ್ಲಿ ಬರುವ ಮಾಜಿ ಸೈನಿಕರಿಗೆ ಒಂದು ಮನೆ ಮತ್ತು ಒಂದು ನಿವೇಶನಕ್ಕೆ ಕಂದಾಯದ ಮೊತ್ತದಲ್ಲಿ ಶೇ 50 ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ.

ಸಿಎಸ್‌ಡಿ ಕ್ಯಾಂಟೀನ್ ಸಾಮಾಗ್ರಿಗಳ ಮೇಲೆ ಕಂದಾಯವನ್ನು ಸಂಪೂರ್ಣ ರಿಯಾಯಿತಿ ನೀಡುವ ಬಗ್ಗೆ, HQ Karnataka, Kerala & Sub Area ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ(ರಿ)ದ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಸಂಖ್ಯೆ: ಹೆಚ್‌ಡಿ 67 ಕೆಎಸ್‌ಎಸ್ 2024

(ಡಾ. ಜಿ. ಪರಮೇಶ್ವರ)
ಗೃಹ ಸಚಿವರು